# ಸಮಗ್ರ ಶಿಕ್ಷಣ -ಕರ್ನಾಟಕ

ರಾಜ್ಯ ಯೋಜನಾ ನಿರ್ದೇಶಕರ ಕಛೇರಿ, ಹೊಸ ಸಾರ್ವಜನಿಕ ಕಟ್ಟಡಗಳ ಪೂರಕ ಕಟ್ಟಡ, ನೃಪತುಂಗ ರಸ್ತೆ, ಬೆಂಗಳೂರು-560001

ಸಂಖ್ಯೆ: SSK/TRG/NTA/1/2026-JDQ ದಿನಾಂಕ:25/06/2026

## ಸುತ್ತೋಲೆ

**ವಿಷಯ:** 2026ನೇ ಸಾಲಿನ ರಾಷ್ಟ್ರೀಯ ಶಿಕ್ಷಕರ ಪ್ರಶಸ್ತಿಗೆ ಅರ್ಹ ಶಿಕ್ಷಕರಿಂದ ಆನ್‌ಲೈನ್ ಸ್ವಯಂ-ನಾಮನಿರ್ದೇಶನಗಳನ್ನು ಸಲ್ಲಿಸುವ ಕುರಿತು.

ಉಲ್ಲೇಖ: ಶಿಕ್ಷಣ ಸಚಿವಾಲಯ, ಭಾರತ ಸರ್ಕಾರದ ಪತ್ರ ಸಂಖ್ಯೆ: D.O. No. 1-3/2026-NAT, ದಿನಾಂಕ:15/06/2026

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2026ನೇ ಸಾಲಿನ ರಾಷ್ಟ್ರೀಯ ಶಿಕ್ಷಕರ ಪ್ರಶಸ್ತಿಗಾಗಿ ಅರ್ಹ ಶಾಲಾ ಶಿಕ್ಷಕರಿಂದ ಆನ್‌ಲೈನ್ ಸ್ವಯಂ-ನಾಮನಿರ್ದೇಶನಗಳನ್ನು ಆಹ್ವಾನಿಸಲು ರಾಷ್ಟ್ರೀಯ ಶಿಕ್ಷಕರ ಪ್ರಶಸ್ತಿ ಪೋರ್ಟಲ್ https://nationalawardstoteachers.education.gov.in ಅನ್ನು ದಿನಾಂಕ 15.06.2026 ರಿಂದ ತೆರೆಯಲಾಗಿದೆ.

ಆದ್ದರಿಂದ, ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಅನುದಾನ ರಹಿತ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರ್ಹ ಶಿಕ್ಷಕರು ರಾಷ್ಟ್ರೀಯ ಶಿಕ್ಷಕರ ಪ್ರಶಸ್ತಿಗಾಗಿ ಪೋರ್ಟಲ್‌ನಲ್ಲಿ ನೋಂದಾಯಿಸಿಕೊಂಡು ಸ್ವಯಂ-ನಾಮನಿರ್ದೇಶನಗಳನ್ನು ಸಲ್ಲಿಸಲು ತಿಳಿಸಲಾಗಿದೆ. ನಾಮನಿರ್ದೇಶನಗಳನ್ನು ಸಲ್ಲಿಸಲು ದಿನಾಂಕ 10.07.2026 ಕೊನೆಯ ದಿನವಾಗಿದ್ದು, ಅರ್ಜಿದಾರರು ತಮ್ಮ ಅರ್ಜಿಗಳನ್ನು ಅಂತಿಮಗೊಳಿಸಿ ಸಲ್ಲಿಸಲು ದಿನಾಂಕ 13.07.2026 ರವರೆಗೆ ಅವಕಾಶವಿರುತ್ತದೆ.

ಜಿಲ್ಲಾ ಉಪನಿರ್ದೇಶಕರು (ಆಡಳಿತ) ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿನ ಎಲ್ಲಾ ಶಾಲೆಗಳಿಗೆ ಈ ಮಾಹಿತಿಯನ್ನು ವ್ಯಾಪಕವಾಗಿ ಪ್ರಚಾರಗೊಳಿಸಿ, ಮಾರ್ಗಸೂಚಿಗಳನ್ನು ಅಧ್ಯಯನ ಮಾಡಿ, ಅರ್ಹ ಶಿಕ್ಷಕರು ಹೆಚ್ಚಿನ ಸಂಖ್ಯೆಯಲ್ಲಿ ನಿಗದಿತ ಅವಧಿಯೊಳಗೆ ತಮ್ಮ ಅರ್ಜಿಗಳನ್ನು ಸಲ್ಲಿಸುವಂತೆ ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಿದೆ.

**ವಿಶೇಷ ಸೂಚನೆ: ಪ್ರತಿ ಜಿಲ್ಲೆಯಿಂದ 60 ಶಿಕ್ಷಕರು ಕಡ್ಡಾಯವಾಗಿ ನಾಮನಿರ್ದೇಶನ ಮಾಡಲು ಉಪನಿರ್ದೇಶಕರು (ಆಡಳಿತ, ಅಭಿವೃದ್ಧಿ)ರವರು ಕ್ರಮಕೈಗೊಳ್ಳುವುದು.**

ರಾಜ್ಯ ಯೋಜನಾ ನಿರ್ದೇಶಕರು,
ಸಮಗ್ರ ಶಿಕ್ಷಣ ಕರ್ನಾಟಕ,

**ಇವರಿಗೆ:**

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ,ಅಭಿವೃದ್ಧಿ), ಶಾಲಾ ಶಿಕ್ಷಣ ಇಲಾಖೆರವರಿಗೆ ಮುಂದಿನ ಅಗತ್ಯ ಕ್ರಮ್ಮಕಾಗಿ
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮುಂದಿನ ಅಗತ್ಯ ಕ್ರಮ್ಮಕಾಗಿ
3. ಕಛೇರಿ ಪ್ರತಿ